**ಕೃಷಿ ವಿಶ್ವ ವಿದ್ಯಾನಿಲಯ**

**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**

**ಜಿ.ಕೆ.ವಿ.ಕೆ., ಬೆಂಗಳೂರು–560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

---

**ದಿನಾಂಕ:** 28.04.2023

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

### (ದಿನಾಂಕ 29-04-2023 ರಿಂದ 03-05-2023 ವರೆಗೆ)

| ನಿಯತಾಂಕಗಳು | 29.04.2023 | 30.04.2023 | 01.05.2023 | 02.05.2023 | 03.05.2023 |
|---|---|---|---|---|---|
| ಮಳೆ (ಮಿ ಮಿ) | 1 | 7 | 6 | 15 | 4 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 33 | 33 | 33 | 33 | 33 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 22 | 22 | 22 | 22 | 22 |
| ಮೋಡ (ಪ್ರಮಾಣ) | 4 | 4 | 5 | 5 | 5 |
| ಆರ್ದ್ರತೆ 7.20 ಬೆ (ಶೇ) | 68 | 68 | 74 | 74 | 74 |
| ಆರ್ದ್ರತೆ 2.20 ಮ (ಶೇ) | 36 | 36 | 39 | 39 | 39 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 8 | 7 | 7 | 7 | 8 |
| ಗಾಳಿಯ ದಿಕ್ಕು ( ಡಿಗ್ರಿ) | 162 | 202 | 135 | 150 | 118 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **33.0°C** ಮತ್ತು ಕನಿಷ್ಠ **22.0°C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **68-74 %** ಇದ್ದು ಮಧ್ಯಾಹ್ನ **36-39 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **7-8** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| | | • ಮುಂದಿನ ನಾಲ್ಕೈದು ದಿನಗಳಲ್ಲಿ ಮೊಡಕವಿದ ವಾತಾವರಣವಿದ್ದು ಗುಡುಗು ಸಹಿತ ಹಗುರ ಮಳೆ ನಿರೀಕ್ಷೆ ಇದೆ.<br>• ಬೇಸಿಗೆ ಉಳುಮೆ ಮಾಡುವುದರಿಂದ ಹುಳುಗಳ ವಿವಿಧ ಹಂತಗಳನ್ನು ನಾಶಪಡಿಸಬಹುದು ಮತ್ತು ಕಳೆಗಳನ್ನು ನಿಯಂತ್ರಿಸಬಹುದು.<br>• ಕೆರೆಗಳಲ್ಲಿ ಗೋಡು ಮಣ್ಣನ್ನು ತೆಗೆದು ಭೂಮಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು<br>• ಪೂರ್ವ ಮುಂಗಾರಿಗೆ ಅಲಸಂದೆ, ಎಳ್ಳು ಮತ್ತು ಅವರೆ ಬಿತ್ತನೆ ಬೀಜಗಳನ್ನು ಸಿದ್ಧತೆಗಳನ್ನು ಮಾಡಿಕೊಳ್ಳಿ,<br>• ಬಿತ್ತನೆಗೆ ಬೇಕಾಗುವ ಪರಿಕರಗಳ ಪೂರಕಗಳನ್ನು ಸಿದ್ಧತೆ ಮಾಡಿಕೊಳ್ಳಿ. |
| ಮಾವು | ಹೂವಿನ ಹಂತ, ಕಾಯಿ ಕಟ್ಟುವ ಹಂತ( ಮಿಡಿ) | 1. ವಿಕೃತ ಹೂ ಗೊಂಚಲು ರೋಗವನ್ನು ಹತೋಟಿ ಮಾಡಲು, ರೋಗ ಬಂದ ರೆಂಬೆಗಳು ಮತ್ತು ಹೂ ಗೊಂಚಲುಗಳನ್ನು ಕತ್ತರಿಸಿ ನಾಶಪಡಿಸಬೇಕು. ಅನಂತರ 1 ಗ್ರಾಂ ಕಾರ್ಬೆಂಡಜಿಂ ಒಂದು ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಮರದ ಅಲ್ಲಾ ಭಾಗಕ್ಕೆ ಸಿಂಪಡಿಸಿ.<br>2. ಮಾವು ಬೆಳೆಯಲ್ಲಿ ಕಾಯಿ ಉದುರುವುದು ಕಂಡು ಬಂದಿದೆ. ಮಾವಿನ ಬೆಳೆ ಕಾಯಿಕಟ್ಟುವ (ಗೊಟ್ಟ ಹಂತ) ಹಂತದಲ್ಲಿ ಇದ್ದು, ರೈತರು ತಪ್ಪದೆ ನೀರಿನ ನೀರುಣಿಸಬೇಕು.<br>3. ನೀರಿನ ಅನುಕುಲತೆಗಳು ಹೆಚ್ಚಿಗೆ ಇದ್ದ ರೈತರು ಕಾಯಿಕಟ್ಟುವ ಹಂತದಿಂದ ಮಾಗುವ ಹಂತದವರೆಗೆ ಪ್ರತಿ 15–20 ದಿನಗಳಿಗೊಮ್ಮೆ ನೀರುಣಿಸಬೇಕು.<br>4. ಮಾವಿನಲ್ಲಿ ಕಾಯಿಗಳು ಉದುರುವುದನ್ನು ತಡೆಗಟ್ಟಲು ಗೊಟ್ಟ ಹಂತದಲ್ಲಿ ನ್ಯಾಪ್ತಲಿನ್ ಅಸಿಟಿಕ್ ಆಸಿಡ್ 20 ಪಿ.ಪಿ.ಎಮ್. 15 ದಿನಗಳಿಗೊಮ್ಮೆ 2 ಬಾರಿ ಕೊಡುವುದು<br>5. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ |

| | | |
|---|---|---|
| | | ಮಿಶ್ರ ಮಾಡಿ ಸಿಂಪಡಿಸಿ.<br>6. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.<br>7. ಮಾವಿನ ಗಿಡದ ಕೆಳಗೆ ಬೆಳೆದಿರುವ ಹುತ್ತಗಳನ್ನು ನಾಶಪಡಿಸಬೇಕು ಮತ್ತು ಗೆದ್ದಲು ಹುಳುಗಳನ್ನು ನಾಶಪಡಿಸಲು ಕ್ಲೋರೊಪೈರಿಫಾಸ್ 5–10 ಮಿ.ಲೀ/ಪ್ರತಿ ಲೀ ನಿರಿಗೆ ಬೆರಸಿ ಹುತ್ತಗಳಿಗೆ ಸುರಿಯಬೇಕು ಅಥವಾ ಒಂದು ಮೀಟರ್ ಸುತ್ತಳತೆ ಇರುವ ಹುತ್ತಕ್ಕೆ 2 ಅಲ್ಯೂಮಿನಿಯಂ ಪಾಸ್ಫೈಡ್ ಮಾತ್ರೆಗಳನ್ನು ಹಾಕಿ ಗಾಳಿ ಹೊರ ಹೋಗದಂತೆ ಎಲ್ಲಾ ರಂಧ್ರಗಳನ್ನು ಹಸಿ ಮಣ್ಣಿನಿಂದ ಮುಚ್ಚಿ. |
| **ಪಶುಸಂಗೋಪನೆ** | | 1. ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.)<br>2. ಹೆಚ್ಚು ಪಶು ಆಹಾರ ತಿನ್ನಿಸುವ ಸಮಯದಲ್ಲಿ ಅದನ್ನು 3–4 ಸಮಭಾಗ ಮಾಡಿ ನಿತ್ಯ ನಾಲ್ಕು ಬಾರಿ ತಿನ್ನಿಸುವುದು ಉತ್ತಮ.<br>3. ದ್ವಿದಳ ಧಾನ್ಯಗಳ ಬೆಳೆಗಳಲ್ಲಿ ಕರಗುವ ಶರ್ಕರ ಪದಾರ್ಥಗಳು ಕಡಿಮೆ ಇದ್ದು ತೇವಾಂಶ ಹೆಚ್ಚಿರುವುದರಿಂದ ಬೆಳೆಗಳನ್ನು ಸ್ವಲ್ಪ ಬಾಡಿಸಿ ಉಪಯೋಗಿಸಬೇಕು. ದ್ವಿದಳ ಧಾನ್ಯದ ಸೊಪ್ಪುಗಳನ್ನು ರಸ ಮೇವಿನಲ್ಲಿ ಶೇ.10 ರಿಂದ 15 ರಷ್ಟು ಮಾತ್ರ ಉಪಯೋಗಿಸಬೇಕು.<br>4. ಬೆಳೆಯಲ್ಲಿ ಶೇ. 65–70 ರಷ್ಟು ತೇವಾಂಶ ಇರಬೇಕು. ತೇವಾಂಶ ಇದಕ್ಕಿಂತಲೂ ಕಡಿಮೆಯಾದರೆ ಹುದುಗುವಿಕೆ ವಿಫಲಗೊಂಡು ಕಳಪೆ ಗುಣಮಟ್ಟದ ಕಂದು ಬಣ್ಣದ ರಸಮೇವು ತಯಾರಾಗುತ್ತದೆ. ಇದೇ ರೀತಿ ಮೇವಿನಲ್ಲಿ ತೇವಾಂಶ ಶೇ.70 ಕ್ಕಿಂತಲೂ ಹೆಚ್ಚಿದ್ದರೆ ರಸಸಾರ ಹೆಚ್ಚಾಗಿ ಮೇವು ಹುಳಿಯಾಗಿ ಕೊಳೆತ ವಾಸನೆಯಿಂದ ಕೂಡಿರುತ್ತದೆ.<br>**ಬೇಸಿಗೆ ತಿಂಗಳಿನಲ್ಲಿ ಪಶು ಸಂಗೋಪನಾ ಸಲಹೆಗಳು :**<br>1. ಬಿಸಿಲು ಹೆಚ್ಚಾಗಿರುವುದರಿಂದ ಹಸಿರು ಹುಲ್ಲಿನ ಅಭಾವ ಕಂಡುಬರುತ್ತದೆ ಆದುದರಿಂದ ಹಗೇವಿನಲ್ಲಿ ರಸಮೇವನ್ನು ತಯಾರಿಸಿ ಮತ್ತು ಒಣ ಹುಲ್ಲು ಮತ್ತು ಬೆಳೆಯ ಉಳಿಕೆಗಳನ್ನು ದನಕರುಗಳಿಗೆ ಕೊಡಿ.<br>2. ದನಕರುಗಳ ಕೊಟ್ಟಿಗೆಯ ಮೇಲೆ 4–6 ಇಂಚು ಹುಲ್ಲಿನ ಹೊದಿಕೆಯನ್ನು ಹಾಕಿ, ಮದ್ಯಾಹ್ನದಲ್ಲಿ 2–3 ಸಲ ನೀರು ಹೊಡೆಯಬೇಕು ಹಾಗೂ ಕೊಟ್ಟಿಗೆಯ ನೆಲ ಮತ್ತು ಗೋಡೆಗಳಿಗೂ ಸಹ ನೀರು ಹೊಡೆಯಬೇಕು. ಇದರಿಂದ ಕೊಟ್ಟಿಗೆಯು ತಕ್ಕಮಟ್ಟಿಗೆ ತಂಪಾಗಿ ಉಳಿಯುತ್ತದೆ.<br>3. ಕೊಟ್ಟಿಗೆಯಲ್ಲಿ ಗಾಳಿ ಸರಾಗವಾಗಿ ಆಡುವಂತೆ ವ್ಯವಸ್ಥೆ ಮಾಡಬೇಕು.<br>4. ಸ್ವಚ್ಛವಾದ ನೀರನ್ನು ಮೇಲಿಂದ ಮೇಲೆ ಕುಡಿಸಬೇಕು.<br>5. ರಾಸುಗಳನ್ನು ಬಿಸಿಲಿಗೆ ಬಿಡಬಾರದು, ಬೆಳಿಗ್ಗೆ ಅಥವಾ ಸಂಜೆ ವೇಳೆಯಲ್ಲಿ ರಾಸುಗಳನ್ನು ಮೇಯಲು ಬಿಡಬೇಕು. |
| **ಕೋಳಿ ಸಾಕಾಣಿಕೆ** | | **ಬೇಸಿಗೆ ತಿಂಗಳಿನಲ್ಲಿ ಕೋಳಿ ಸಾಕಾಣಿಕೆ ಸಲಹೆಗಳು :**<br>ಸರಾಸರಿ ಉಷ್ಣಾಂಶ 33–36 $^{o}$C , ಸರಾಸರಿ ಆರ್ದ್ರತೆ ಪ್ರಮಾಣ, < 50 % (RH) **ಮತ್ತು** ಸರಾಸರಿ ಗಾಳಿಯ ವೇಗ < 5 ಕಿ.ಮೀ/ಘಂಟೆಗೆ<br>➢ ನೀರಿನ ಟ್ಯಾಂಕ್ ನ ಮೇಲ್ಹಾವಣಿಯನ್ನು ಒದ್ದೆಯಾದ ಗೋಣಿ ಚೀಲದಲ್ಲಿ ಮುಚ್ಚಿಡಬೇಕು ಇದರಿಂದ ನೀರು ಬಿಸಿಯಾಗುವುದನ್ನು ತಡೆಯಬಹುದು.<br>➢ ಬೇಸಿಗೆ ಹೆಚ್ಚಾಗಿರುವುದರಿಂದ ಕೋಳಿಗಳಿಗೆ ಬೆಳಗಿನ ಜಾವ ಮತ್ತು ಸಂಜೆ ವೇಳೆಯಲ್ಲಿ ನೀರನ್ನು ಯತೇಚ್ಚವಾಗಿ ಕೊಡಬೇಕು.<br>➢ ಕಿಟಕಿಯಲ್ಲಿ ಗಾಳಿಯು ಸರಾಗವಾಗಿ ಬೀಸುವ ಹಾಗೆ ನೋಡಿಕೊಳ್ಳಬೇಕು ಪೆಡೆಸ್ಟ್ರಾನ್ ಫ್ಯಾನ್ ಮೂಲಕ ಬಿಸಿ ಗಾಳಿಯು ಹೊರಹೊಗುವಂತೆ ನೋಡಿಕೊಳ್ಳಬೇಕು. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.